ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	::	1210
ಸದಸ್ಯರ ಹೆಸರು	::	ಶ್ರೀ ಕಾಂತರಾಜ್(ಬಿಎಂಎಲ್) (ಸ್ಥಳೀಯ ಸಂಸ್ಥೆಗಳ)
ಉತ್ತರಿಸುವ ದಿನಾಂಕ	::	22-09-2021
ಉತ್ತರಿಸುವ ಸಚಿವರು	::	ಕಂದಾಯ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ)	ಕಂದಾಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿವೇಶನ, ಮನೆ ಹಾಗೂ ಇತರೆಗಳಿಗೆ ಸಂಬಂಧಿಸಿದಂತೆ, ಅಕ್ರಮ-ಸಕ್ರಮ ಕಾರ್ಯಕ್ರಮಗಳನ್ನು ಸರ್ಕಾರ ಯಾವಾಗಿನಿಂದ ಜಾರಿಗೆ ತರಲಾಗಿದೆ: ಇದರ ರೂಪುರೇಷೆಗಳೇನು:(ಆದೇಶದ ಪ್ರತಿಯೊಂದಿಗೆ ವಿವರವಾದ ಮಾಹಿತಿ ಕೊಡುವುದು)	ಗ್ರಾಮಾಂತರ ಮತ್ತು ನಗರ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಸದ ಮನೆಗಳನ್ನು ಸಕ್ರಮಗೊಳಿಸುವ ಸಲುವಾಗಿ ಕ್ರಮವಾಗಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿ ದಿನಾಂಕ:03.03.2014 ರಿಂದ ಹಾಗೂ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿಸಿ ದಿನಾಂಕ:28.08.2015 ರಿಂದ ಜಾರಿಗೆ ಬಂದಿರುತ್ತದೆ. ಸರ್ಕಾರಿ ಜಮೀನುಗಳಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ 30X40, 40X60 ಮತ್ತು 50X80 ಅಡಿ ಅಳತೆಯ ವಾಸದ ಮನೆಗಳನ್ನು ಸಕ್ರಮಗೊಳಿಸುವ ಸಲುವಾಗಿ ಕ್ರಮವಾಗಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿ ರಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ. ಸರ್ಕಾರಿ ಜಮೀನುಗಳಲ್ಲಿ ನಗರ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ 20X30 ಅಡಿ ಅಳತೆಯ ಹಾಗೂ ಬಿಬಿಎಂಪಿ, ನಗರ ಕಾರ್ಪೋರೇಷನ್, ಸಿಎಂಸಿ, ಟಿಎಂಸಿ ಮತ್ತು ಪಟ್ಟಣ ಪಂಚಾಯತ್ ವ್ಯಾಪ್ತಿಯಿಂದ ನಿರ್ದಿಷ್ಟಪಡಿಸಿದ ಅಂತರದೊಳಗಿನ ಬಫರ್‌ಜೋನ್ ಪ್ರದೇಶಗಳಲ್ಲಿ ನಿರ್ಮಿಸಿರುವ 30X40 ವಿಸ್ತೀರ್ಣದ ವಾಸದ ಮನೆಗಳನ್ನು ಸಕ್ರಮಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿಸಿ ರಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ.
ಆ)	ಬೀದರ್ ಜಿಲ್ಲೆಯ ಹುಮ್ನಾಬಾದ್ ತಾಲ್ಲೂಕು ಕಛೇರಿಯಲ್ಲಿ ಅಕ್ರಮ-ಸಕ್ರಮ ಅರ್ಜಿಗಳನ್ನು ಸ್ವೀಕರಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅರ್ಜಿಗಳನ್ನು ಸ್ವೀಕರಿಸದಿರಲು ಕಾರಣಗಳೇನು;	ಬೀದರ್ ಜಿಲ್ಲೆಯ ಹುಮ್ನಾಬಾದ್ ತಾಲ್ಲೂಕು ಕಛೇರಿಯಲ್ಲಿ ಅಕ್ರಮ-ಸಕ್ರಮ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ.

ಇ)	ಬೀದರ್ ಜಿಲ್ಲೆಯ ಹುಮ್ನಾಬಾದ್ ತಾಲ್ಲೂಕಿನಲ್ಲಿ ಅಕ್ರಮ-ಸಕ್ರಮ ಅರ್ಜಿಗಳನ್ನು ಸ್ವೀಕರಿಸಲು ತಾಲ್ಲೂಕು ಆಡಳಿತಕ್ಕೆ ಸೂಚಿಸಲಾಗುವುದೇ; ಹೌದಾದಲ್ಲಿ ಯಾವ ಅವಧಿಯಿಂದ ಯಾವ ಅವಧಿಯವರೆಗೆ ಸ್ವೀಕರಿಸಲು ಸೂಚಿಸಲಾಗಿದೆ; (ಮಾಹಿತಿ ನೀಡುವುದು)	ಬೀದರ್ ಜಿಲ್ಲೆಯ ಹುಮ್ನಾಬಾದ್ ತಾಲ್ಲೂಕಿನಲ್ಲಿ ಸಂಬಂಧಪಟ್ಟ ನಾಡ ಕಛೇರಿಗಳ ನೆಮ್ಮದಿ ಕೇಂದ್ರಗಳಲ್ಲಿ ಅಕ್ರಮ-ಸಕ್ರಮ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ. ಅಕ್ರಮ-ಸಕ್ರಮ ಅರ್ಜಿಗಳನ್ನು 31/03/2022ರ ವರೆಗೆ ಸ್ವೀಕರಿಸಲು ಅವಕಾಶವಿದೆ.
ಈ	ಅಕ್ರಮ-ಸಕ್ರಮ ಕಾರ್ಯಕ್ರಮದಡಿ ಸಾರ್ವಜನಿಕರು ಯಾವ ನಮೂನೆಯಲ್ಲಿ ನಿವೇಶನ, ಮನೆ, ಜಮೀನು ಇತರೆಗಳನ್ನು ಸಕ್ರಮಗೊಳಿಸಲು ಅರ್ಜಿ ಸಲ್ಲಿಸಿಬೇಕು: (ಯಥಾ ನಮೂನೆಯೊಂದಿಗೆ ವಿವರವಾದ ಮಾಹಿತಿ ಕೊಡುವುದು)	ಗ್ರಾಮಾಂತರ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಸದ ಮನೆಗಳನ್ನು ಸಕ್ರಮಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿ ರಡಿ ಸಕ್ರಮ ಕೋರಿ ನಮೂನೆ-3ಎ ರಡಿ ಹಾಗೂ ನಗರ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಸದ ಮನೆಗಳನ್ನು ಸಕ್ರಮಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿಸಿ ರಡಿ ನಮೂನೆ-1ಎ ರಡಿ ಅರ್ಜಿಗಳನ್ನು ಸಲ್ಲಿಸಬೇಕು.
ಉ	ಅಕ್ರಮ-ಸಕ್ರಮದಡಿ ಬರುವ ಅರ್ಜಿಗಳನ್ನು ಮಂಜೂರು/ಇತ್ಯರ್ಥಪಡಿಸಲು ಯಾವ ಸಮಿತಿಗೆ ಅಧಿಕಾರ ನೀಡಲಾಗಿದೆ? (ಸಮಿತಿಯಲ್ಲಿರುವ ಸದಸ್ಯರುಗಳ ವಿವರವಾದ ಮಾಹಿತಿ ಕೊಡುವುದು)	ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿ ರಡಿ ಸ್ವೀಕರಿಸಿದ ಅರ್ಜಿಗಳನ್ನು ಇತ್ಯರ್ಥಪಡಿಸಲು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108ಯು ರನ್ವಯ ತಹಶೀಲ್ದಾರ್ ಗ್ರೇಡ್-1 ಇವರು ಸಕ್ಷಮ ಪ್ರಾಧಿಕಾರಿಗಳಾಗಿರುತ್ತಾರೆ. ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿಸಿ ರಡಿ ಸ್ವೀಕರಿಸಿದ ಅರ್ಜಿಗಳನ್ನು ಇತ್ಯರ್ಥಪಡಿಸಲು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108ವಿ ರನ್ವಯ ತಹಶೀಲ್ದಾರ್ ಗ್ರೇಡ್-1 ಇವರು ಸಕ್ಷಮ ಪ್ರಾಧಿಕಾರಿಗಳಾಗಿರುತ್ತಾರೆ.

ಸಂಖ್ಯೆ:ಕಂಇ 27 ಎಲ್‌ಜಿಐ 2021

(ಆರ್.ಅಶೋಕ್)
ಕಂದಾಯ ಸಚಿವರು